ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

NO. 1, Unnatha Shikshana Soudha, Sheshadri Road, Bangalore - 560 001 Phone: 080 22343904, email: bngcce@kar.nic.in

ಸಂಖ್ಯೆ:ಕಾಶಿಇ/ಮಾತಂವಿ/22/ಇ-ಆಫೀಸ್/2021-22

ಕಾಲೇಜು ಶಿಕ್ಷಣ ಆಯುಕ್ತರವರ ಕಛೇರಿ,
ಬೆಂಗಳೂರು, ದಿನಾಂಕ: 22.10.2021.

## ಸುತ್ತೋಲೆ

ವಿಷಯ: ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ಇ-ಆಫೀಸ್ ಉಪಕ್ರಮ ಅನುಷ್ಠಾನವಾಗಿರುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಪತ್ರ ಸಂಖ್ಯೆ: ಕಾಶಿಇ ಮಾತಂವಿ 36 ಇ-ಆಫೀಸ್ 2018-19ರ ದಿನಾಂಕ: 20.07.2020
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ(ಆ.ಸು) 56 ಕತವ 2021 ಬೆಂಗಳೂರು ದಿನಾಂಕ: 15.09.2021.

******

ಉಲ್ಲೇಖ-2ರ ಸರ್ಕಾರದ ಆದೇಶದನ್ವಯ 1ನೇ ಅಕ್ಟೋಬರ್ 2021 ರಿಂದ ಸರ್ಕಾರದ ಎಲ್ಲಾ ಕಛೇರಿಗಳಲ್ಲಿ ಇ-ಆಫೀಸ್ ತಂತ್ರಾಂಶದ ಬಳಕೆಯನ್ನು ಕಡ್ಡಾಯಗೊಳಿಸಲಾಗಿದ್ದು, ಈ ಆದೇಶವನ್ನು ಉಲ್ಲಂಘಿಸುವ ಅಧಿಕಾರಿಯನ್ನು ಹೊಣೆಗಾರರನ್ನಾಗಿ ಮಾಡಲಾಗುವುದೆಂದು ತಿಳಿಸಿರುವ ಅಂಶವನ್ನು ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಗಮನಕ್ಕೆ ತರಲಾಗಿದೆ. ಈಗಾಗಲೇ ಈ ಕುರಿತಂತೆ ಅನೇಕ ಬಾರಿ ಸೂಚನೆಗಳನ್ನು ನೀಡಲಾಗಿದ್ದಾಗ್ಯೂ, ಕೆಲವು ಪ್ರಾದೇಶಿಕ ಕಛೇರಿಗಳಲ್ಲಿ ಇ-ಆಫೀಸ್ ತಂತ್ರಾಂಶವನ್ನು ಬಳಕೆ ಮಾಡುತಿಲ್ಲದಿರುವುದು ಕೇಂದ್ರ ಕಛೇರಿಯ ಗಮನಕ್ಕೆ ಬಂದಿದೆ. ಉಲ್ಲೇಖ-1ರ ಈ ಕಛೇರಿ ಪತ್ರದಲ್ಲಿ ಇ-ಆಫೀಸ್ ಅನುಷ್ಠಾನಕ್ಕೆ ಅಗತ್ಯವಾದ ಎಲ್ಲಾ ತಾಂತ್ರಿಕ ಸಿದ್ಧತೆಗಳನ್ನು ಮಾಡಿಕೊಳ್ಳುವ ಬಗ್ಗೆ ಮಾರ್ಗದರ್ಶನವನ್ನು ನೀಡಲಾಗಿದ್ದು, ಈ ಕುರಿತಂತೆ ಕೇಂದ್ರ ಕಛೇರಿಯನ್ನು ಸಂಪರ್ಕಿಸಿದ ಕೂಡಲೇ ಅಗತ್ಯವಾದ ಎಲ್ಲಾ ಸಹಕಾರವನ್ನು ಕೂಡ ನೀಡಲಾಗಿರುತ್ತದೆ. ಆದರೆ ತಾಂತ್ರಿಕ ತೊಂದರೆಗಳ ಕಾರಣವನ್ನು ಮುಂದೊಡ್ಡಿ ಅನುಷ್ಠಾನದಲ್ಲಿ ವಿಳಂಬ ಮಾಡುತ್ತಿರುವುದನ್ನು ಗಮನಿಸಲಾಗಿದೆ.

ಉಲ್ಲೇಖ-2ರ ಸರ್ಕಾರಿ ಆದೇಶದಲ್ಲಿ ಇ-ಆಫೀಸ್ ವ್ಯವಸ್ಥೆಗೆ ಬದಲಾವಣೆ/ವರ್ಗಾವಣೆ ಮಾಡಿಕೊಳ್ಳುವಲ್ಲಿ ಯಾವುದೇ ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ ಈ ಬಗ್ಗೆ ನೆರವು ಪಡೆಯಲು ಎನ್.ಐ.ಸಿ. ಮತ್ತು ಸೆಂಟರ್ ಫಾರ್ ಇ-ಆಡಳಿತ ಮತ್ತು ಸಿಆಸುಇ(ಇ-ಆಡಳಿತ) ಇವರನ್ನು ಸಂಪರ್ಕಿಸಬಹುದೆಂದು ತಿಳಿಸಿರುವ ಅಂಶವನ್ನು ಗಮನಕ್ಕೆ ತರುತ್ತಾ, ತಕ್ಷಣದಿಂದ ಜಾರಿಗೆ ಬರುವಂತೆ ಇ-ಆಫೀಸ್ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿ ದಿನಾಂಕ: 26.10.2021ರೊಳಗಾಗಿ ಕೇಂದ್ರ ಕಛೇರಿಗೆ ವರದಿಯನ್ನು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಮತ್ತು ಇ-ಆಫೀಸ್ ನೋಡಲ್ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

KSWAN ತಾಂತ್ರಿಕ ಸಹಾಯಕ್ಕಾಗಿ ಸಂಪರ್ಕಿಸಬೇಕಾದ ಸಂಖ್ಯೆಗಳು: 9986153108

e-office ತಾಂತ್ರಿಕ ಸಹಾಯಕ್ಕಾಗಿ ಸಂಪರ್ಕಿಸಬೇಕಾದ ಸಂಖ್ಯೆಗಳು: 8277805359, 9901024365, 9916091911, 9481615185

*ಲಗತ್ತು: ಉಲ್ಲೇಖ-2ರ ಆದೇಶ*

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ & ಕಲಬುರಗಿ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
2. ಕಛೇರಿ ಪ್ರತಿ

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಜಿಲ್ಲಾಧಿಕಾರಿಗಳ / ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ / ಇಲಾಖಾ ಮುಖ್ಯಸ್ಥರುಗಳ ಎಲ್ಲಾ ಕಛೇರಿಗಳಲ್ಲಿ ಎಲ್ಲಾ ಕಡತಗಳನ್ನೂ ಹಾಗೂ ಪತ್ರಗಳನ್ನು e-office ಮೂಲಕವೇ ಚಲನವಲನಗೊಳಿಸುವ ಬಗ್ಗೆ.

***

<u>ಪ್ರಸ್ತಾವನೆ:</u>

ಕರ್ನಾಟಕ ಸರ್ಕಾರದ ಸಚಿವಾಲಯ ಮತ್ತು ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮತ್ತು ಎಲ್ಲಾ ಇಲಾಖಾ ಮುಖ್ಯಸ್ಥರುಗಳ ಕಛೇರಿಗಳಲ್ಲಿ ಕರ್ನಾಟಕ ಸರ್ಕಾರವು ಎನ್.ಐ.ಸಿ ಅವರು ಅಭಿವೃದ್ಧಿಪಡಿಸಿರುವ e-office ತಂತ್ರಾಂಶವನ್ನು ಪರಿಚಯಿಸಿದೆ. e-office ತಂತ್ರಾಂಶದಲ್ಲಿಯೇ ಎಲ್ಲಾ ಹೊಸ ಕಡತಗಳನ್ನು ಸೃಜಿಸಿ ನಂತರದ ಪ್ರಕ್ರಿಯೆಗಳನ್ನು ಸಹ ಈ ತಂತ್ರಾಂಶದಲ್ಲಿಯೇ ಮಾಡಬೇಕೆಂದು ಸೂಚನೆ ಸಹ ನೀಡಲಾಗಿದೆ.

ಇತ್ತೀಚೆಗೆ ಜರುಗಿದ ಕಾರ್ಯದರ್ಶಿಗಳ ಸಭೆಯಲ್ಲಿ ಕಡತಗಳ ಚಲನವಲನವನ್ನು ಮತ್ತು ಕಡತಗಳ ನಿರ್ವಹಣಾ ಹಂತಗಳನ್ನು ಕಡಿಮೆ ಮಾಡಲು ಮಾನ್ಯ ಮುಖ್ಯ ಮಂತ್ರಿಗಳು ನಿರ್ದೇಶಿಸಿರುತ್ತಾರೆ. ಮುಂದುವರೆದು ಜಿಲ್ಲಾಧಿಕಾರಿಗಳು/ಇಲಾಖಾ ಮುಖ್ಯಸ್ಥರುಗಳಿಂದ ಸ್ವೀಕರಿಸಲಾಗುವ ಪ್ರಸ್ತಾವನೆಗಳನ್ನು ಕಾರ್ಯದರ್ಶಿಗಳ ಹಂತದಲ್ಲಿಯೇ ನಿರ್ವಹಿಸತಕ್ಕದ್ದೆಂದು ಮಾನ್ಯ ಮುಖ್ಯ ಮಂತ್ರಿಗಳು ಸೂಚಿಸಿರುತ್ತಾರೆ. ಆದ್ದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:

<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆ.ಸು) 55 ಕಡತ 2021,</u>
<u>ಬೆಂಗಳೂರು, ದಿನಾಂಕ: 15ನೇ ಸೆಪ್ಟೆಂಬರ್, 2021.</u>

ದಿನಾಂಕ: 1.10.2021 ರಿಂದ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳು ತಮ್ಮ ಪ್ರಸ್ತಾವನೆಗಳು, ಪತ್ರಗಳು ಹಾಗೂ ವರದಿಗಳನ್ನು ಸಂಬಂಧಪಟ್ಟ ಸರ್ಕಾರದ ಕಾರ್ಯದರ್ಶಿಗೆ e-office ಮೂಲಕವೇ ಚಲನವಲನಗೊಳಿಸಬೇಕು. ಸಂಬಂಧಪಟ್ಟ ಅಧಿಕಾರಿಯು ಸಂಬಂಧಿಸಿದ ಕಾರ್ಯದರ್ಶಿಗೆ ಪ್ರಸ್ತಾವನೆಗಳನ್ನು ಏಕ ಕಡತ ರೀತಿಯಲ್ಲಿ e-office ಮೂಲಕವೇ ಕಳುಹಿಸಬೇಕು.

2. ಕಾರ್ಯದರ್ಶಿಗಳು ಸಾಧ್ಯವಾದಷ್ಟು ತಮ್ಮ ಮಟ್ಟದಲ್ಲೇ ವಿಷಯವನ್ನು ವಿಲೇಗೊಳಿಸಬೇಕು ಅಥವಾ ಸಂಬಂಧಿಸಿದ ಸಚಿವರಿಗೆ ಆದೇಶಕ್ಕಾಗಿ ಸಲ್ಲಿಸಬೇಕು. ವಿಷಯದ ಬಗ್ಗೆ ಹೆಚ್ಚುವರಿ ಮಾಹಿತಿ ಬೇಕಾಗುವಂಥ ಅಸಾಧಾರಣ ಪ್ರಕರಣಗಳ e-office ಕಡತಗಳನ್ನು ಅಥವಾ ಸಚಿವ ಸಂಪುಟ ಟಿಪ್ಪಣಿಯನ್ನು ತಯಾರಿಸಿ ಸಚಿವ ಸಂಪುಟದ ಮುಂದೆ ತರಬೇಕಾಗುವಂಥ ವಿಷಯಗಳಿಗೆ ಸಂಬಂಧಿಸಿದ e-office ಏಕ ಕಡತಗಳನ್ನು ಮಾತ್ರ ಕಾರ್ಯದರ್ಶಿಯವರು ಸಂಬಂಧಿಸಿದ ಉಪ ಕಾರ್ಯದರ್ಶಿಗಳಿಗೆ ಕಳುಹಿಸಬಹುದು.

ಪು.ತಿ.ನೋ

3 ಅಂತೆಯೇ, ಸಚಿವಾಲಯಕ್ಕೆ ಕಳುಹಿಸುವ ಎಲ್ಲಾ ಪತ್ರಗಳು/ವರದಿಗಳನ್ನು e-office ನಲ್ಲಿ ಸ್ವೀಕೃತಿಗಳಾಗಿ ಕಳುಹಿಸಬೇಕು.

4 e-office ವ್ಯವಸ್ಥೆಗೆ ಬದಲಾವಣೆ/ವರ್ಗಾವಣೆ ಮಾಡಿಕೊಳ್ಳುವಲ್ಲಿ ಯಾವುದೇ ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ ಈ ಬಗ್ಗೆ ನೆರವು ಪಡೆಯಲು ಎನ್.ಐ.ಸಿ ಮತ್ತು ಸೆಂಟರ್ ಫಾರ್ ಈ-ಆಡಳಿತ ಮತ್ತು ಸಿಆಸುಇ (ಈ-ಆಡಳಿತ) ಇವರನ್ನು ಸಂಪರ್ಕಿಸಬಹುದು.

5 ಈ ಆದೇಶವು ದಿನಾಂಕ: 1ನೇ ಅಕ್ಟೋಬರ್, 2021 ರಿಂದ ಜಾರಿಗೆ ಬರುತ್ತದೆ. ಈ ಆದೇಶವನ್ನು ಉಲ್ಲಂಘಿಸುವ ಅಧಿಕಾರಿಯನ್ನು ಹೊಣೆಗಾರರನ್ನಾಗಿ ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ. ರವಿ ಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ.

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಎಲ್ಲಾ ಜಿಲ್ಲಾಧಿಕಾರಿಗಳು
3. ಎಲ್ಲಾ ಜಿಲ್ಲಾ ಪಂಚಾಯತ್ತುಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
5. ಶಾಖಾ ರಕ್ಷಾ ಕಡತ